CW.3 PW.3

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ., ಕನಕಪುರ ರವರ ನ್ಯಾಯಾಲಯದಲ್ಲಿ**

# CC No.1693/2022

| | |
|---|---|
| ಸಾಕ್ಷಿದಾರರ ಹೆಸರು | ವಿಶ್ವನಾಥ್ |
| ತಂದೆಯ ಹೆಸರು | ಮಹದೇವಪ್ಪ |
| ವಯಸ್ಸು | 51 ವರ್ಷ |
| ವೃತ್ತಿ | ಖಾಸಗಿ ಕೆಲಸ |
| ವಿಳಾಸ | ಮುಳ್ಳಹಳ್ಳಿ |
| ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ | 07.04.2026 |

**<u>ಮುಖ್ಯ ವಿಚಾರಣೆ ಎ ಪಿ ಪಿ ರವರಿಂದಃ-</u>**

ಆರೋಪಿಯನ್ನು ನೋಡಿರುವುದಿಲ್ಲ. ಚಾಸಾ-2, 4 ರಿಂದ 9 ರವರು ಗೊತ್ತಿರುವುದಿಲ್ಲ.

ಸುಮಾರು 2 ವರ್ಷಗಳ ಹಿಂದೆ ನಾನು ಹುಷಾರಿಲ್ಲದ ಕಾರಣ ಆಸ್ಪತ್ರೆಗೆ ಹೋದಾಗ ನನಗೆ ಸಿಕ್ಕಿ 2 ದಾಖಲೆಗೆ ನನ್ನ ಸಹಿ ಪಡೆದಿರುತ್ತಾರೆ. ನನಗೆ ಯಾವುದಕ್ಕೆ ಮತ್ತು ಯಾವ ಕಾರಣಕ್ಕೆ ಸಹಿ ಪಡೆದಿರುತ್ತಾರೆ ಎಂದು ಗೊತ್ತಿಲ್ಲ.

ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಕೇವಲ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆ ಸ್ಥಳ ಪಂಚನಾಮೆ ಆಗಿದ್ದು ಅದನ್ನು ಈಗಾಗಲೇ ನಿಪಿ-3 ಎಂದು ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು.

CW.3 PW.3

ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಕೇವಲ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆ ಅಮಾನತು ಪಂಚನಾಮೆ ಆಗಿದ್ದು ಅದನ್ನು ಈಗಾಗಲೇ ನಿಪಿ-4 ಎಂದು ಆಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿದಾರ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸ.ಸ ಅ ರವರು ಸಾಕ್ಷಿಯನ್ನು ವಾಟೀ ಸವಾಲನ್ನು ಮಾಡಲು ಅನುಮತಿ ನೀಡಲು ಕೋರಿದ ಮೇರೆಗೆ ಅನುಮತಿ ನೀಡಲಾಯಿತು).**

**ವಾಟೀ ಸವಾಲುಃ ಸ. ಸ. ಅ. ರವರಿಂದ**

ದಿನಾಂಕ 07.02.2021 ರಂದು ಕನಕಪುರ ಟೌನ್ ಶಿರಡಿ ಸಾಯಿ ಕಲ್ಯಾಣ ಮಂಟಪದ ನೇರ ಇರುವ ಬೆಂಗಳೂರು ಕಡೆಯಿಂದ ಕನಕಪುರ ಕಡೆಗೆ ಹೋಗುವ ಟಾರು ರಸ್ತೆಯಲ್ಲಿ ಚಾಸಾ-1 ರವರು ತೋರಿಸಿದ ಸ್ದಳದಲ್ಲಿ ನನ್ನ ಹಾಗೂ ಚಾಸಾ-2 ರವರ ಸಮಕ್ಷಮ ಮಧ್ಯಾಹ್ನ 2 ರಿಂದ 3.15 ಗಂಟೆಯವರೆಗೂ ಈಗ ಓದಿ ಹೇಳಿದಂತೆ ಮಹಜರ್ ಮಾಡಿ ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ 07.02.2021 ರಂದು ಕನಕಪುರ ಟೌನ್ ಗ್ರಾಮಾಂತರ ಪೋಲೀಸ್ ಠಾಣಾ ಆವರಣದಲ್ಲಿ ಅಪಘಾತ ಪಡಿಸಿದ ಕೆಎ-05-ಎಎಫ್ 8029 ವಾಹನವನ್ನು ಚಾಸಾ-1, ನನ್ನ ಹಾಗೂ ಚಾಸಾ-2 ರವರ ಸಮಕ್ಷಮ ಮಧ್ಯಾಹ್ನ 3.15 ರಿಂದ 4.15 ಗಂಟೆಯವರೆಗೂ ಈಗ ಓದಿ ಹೇಳಿದಂತೆ ಮಹಜರ್ ಮಾಡಿ ಅಮಾನತು ಪಡಿಸಿಕೊಂಡು ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನನಗೆ ಎಲ್ಲಾ ಗೊತ್ತಿದ್ದರೂ ಸಹಿತ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಏನೂ ಇರುವುದಿಲ್ಲ**

CW.3 PW.3

**ಮರುವಿಚಾರಣೆಃ ಇರುವುದಿಲ್ಲ**

**ಓ ಹೇ ಕೇ ಸರಿ ಇದೆ**

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ.,**

**ಕನಕಪುರ .**